# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ವಾರ್ಡ್ ಸಂಖ್ಯೆ 11/ಸಭೆ/ಪಿಆರ್/ /2022-23 ದಿನಾಂಕ : 29/04/2022

**ಮಾನ್ಯ ಆಯುಕ್ತರು ರವರ ಸುತ್ತೋಲೆ ಸಂಖ್ಯೆ ಬಿ12(5)/ಪಿ.ಆರ್/35/2020-21 ದಿನಾಂಕ 21/09/2020ರ ಆದೇಶದ ಅನ್ವಯ ಕುವೆಂಪುನಗರಕ್ಕೆ ಸಂಬಂಧಿಸಿದಂತೆ ವಾರ್ಡ್ ನಂ 11 ಕುವೆಂಪುನಗರ ವಾರ್ಡ್ ಕಛೇರಿಯಲ್ಲಿ ದಿನಾಂಕ 29/04/2022 ರಂದು ನೋಡೆಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ಕೈಗೊಂಡ ವಾರ್ಡ್ ಸಮಿತಿ ಸಭೆಯ ನಡವಳಿಗಳು**

ಹಾಜರಿದ್ದ ಅಧಿಕಾರಿ /ನೌಕರರು

1. ಶ್ರೀ ಪ್ರಸನ್ನ ವೆಂಕಟೇಶ್, ನೋಡಲ್ ಅಧಿಕಾರಿ
2. ಶ್ರೀ ಸೋಮಶೇಖರ್ ಜಿ.ಎಲ್, ಸಹಾಯಕ ಅಭಿಯಂತರರು & ಕಾರ್ಯದರ್ಶಿ ಹಾಗೂ ಸಂಚಾಲಕರು
3. ಶ್ರೀ ಎಸ್ ಬಸವರಾಜು, ಕಿ.ಅ, ಬೆಸ್ಕಾಂ
4. ಶ್ರೀಮತಿ ಶಿಲ್ಪ ಬಿ.ಎಸ್, ಕಿ.ಅ, ಬಿಡಬ್ಲ್ಯೂಎಸ್ಎಸ್‌ಬಿ
5. ಶ್ರೀ ಶಿವಣ್ಣ, ಕಂದಾಯ ಪರಿವೀಕ್ಷಕರು
6. ಶ್ರೀ ಲಿಂಗರಾಜು, ಹಿರಿಯ ಆರೋಗ್ಯ ಪರಿವೀಕ್ಷಕರು
7. ಶ್ರೀಮತಿ ಕಾಂತಮಣಿ, ಕಿರಿಯ ಆರೋಗ್ಯ ಪರಿವೀಕ್ಷಕರು

**ಹಾಜರಿದ್ದ ಸದಸ್ಯರು/ ಸಾರ್ವಜನಿಕರು**

1. ಶ್ರೀ ಓಂಕಾರ ಮೂರ್ತಿ, ವೈಷ್ಣವಿ ಲೇಔಟ್
2. ಶ್ರೀ ಗುರುಪ್ರಸಾದ್, ಸಿಂಗಾಪುರ ಪ್ಯಾರಡೈಸ್
3. ಶ್ರೀ ಎಸ್.ಎಂ ಹರೀಶ್, ವರದರಾಜನಗರ
4. ಶ್ರೀ ಸತೀಶ್ ಕುಮಾರ್ ಪಿ.ಸಿ, ಸಿಂಗಾಪುರ
5. ಶ್ರೀ ನಾಗರಾಜು ಎಸ್.ಎಂ, ಸಿಂಗಾಪುರ
6. ಶ್ರೀ ಮಾರಪ್ಪ, ಗಣೇಶ ಲೇಔಟ್

**ಶ್ರೀ ಪ್ರಸನ್ನ ವೆಂಕಟೇಶ್, ನೋಡೆಲ್ ಅಧಿಕಾರಿ:-** ಸಭೆಗೆ ಹಾಜರಿದ್ದ ಅಧಿಕಾರಿಗಳಿಗೆ ಸ್ವಾಗತವನ್ನು ಕೋರಿದರು. ಹಾಗೂ ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ಕಾರ್ಯದರ್ಶಿಗೆ ತಿಳಿಸಿದರು.

ಶ್ರೀ ನಾಗರಾಜು ಎಸ್.ಎಂ ರವರು ಮಾತನಾಡುತ್ತಾ ಕುವೆಂಪುನಗರ ಮುಖ್ಯ ರಸ್ತೆಯಲ್ಲಿ ಬೆಸ್ಕಾಂ ವತಿಯಿಂದ ಯು.ಜಿ ಕೇಬಲ್ ಅಳವಡಿಸುವಾಗ ಒಳಚರಂಡಿ ಮಾರ್ಗದ ಒಳಗೆ ಕೇಬಲ್ ಅಳವಡಿಸಿರುವುದರಿಂದ ಒಳಚರಂಡಿ ಮಾರ್ಗವು ಬ್ಲಾಕ್ ಆಗಿರುವುದರಿಂದ ಸ್ಥಳೀಯ ನಿವಾಸಿಗಳಿಗೆ ತೊಂದರೆ ಉಂಟಾಗಿರುವುದರಿಂದ ಸರಿಪಡಿಸಲು ಕೋರಿದ್ದು, ಶ್ರೀಮತಿ ಶಿಲ್ಪ ಬಿ.ಎಸ್, ಬಿ.ಡಬ್ಲ್ಯೂಎಸ್.ಎಸ್.ಬಿ ರವರು ಪರಿಶೀಲಿಸಿ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ಎಂ.ಎಸ್ ಪಾಳ್ಯ ಮುಖ್ಯ ರಸ್ತೆಯಲ್ಲಿರುವ ಪಾದಚಾರಿ ಮಾರ್ಗದಲ್ಲಿ/ರಸ್ತೆ ಬದಿಯಲ್ಲಿ ವ್ಯಾಪಾರ ಮಾಡುತ್ತಿರುವುದರಿಂದ ಸಂಚಾರ ದಟ್ಟಣೆ ಉಂಟಾಗುತ್ತಿದ್ದು, ಸದರಿ ಅಂಗಡಿಗಳನ್ನು ತೆರವುಗೊಳಿಸಲು ಸಭೆಯಲ್ಲಿ ಕೋರಿದ್ದು, ಹಿರಿಯ ಆರೋಗ್ಯ ಪರಿವೀಕ್ಷಕರು ಕ್ರಮ ವಹಿಸುವುದಾಗಿ ತಿಳಿಸಿದರು.

ಶ್ರೀ ಓಂಕಾರ ಮೂರ್ತಿ ರವರು ಮಾತನಾಡುತ್ತಾ, ವೈಷ್ಣವಿ ಲೇಔಟ್‌ನಲ್ಲಿ ಬೀದಿ ಗುಡಿಸುವಿಕೆ ಕಾರ್ಯ ಹಾಗೂ ಘನತ್ಯಾಜ್ಯ ನಿರ್ವಹಣೆ ಕಾರ್ಯ ಸಮರ್ಪಕವಾಗಿ ನಡೆಯದೆ ಇರುವುದು ಹಾಗೂ ಸೊಳ್ಳೆಗಳ ಔಷಧಿ ಸಿಂಪಡಣೆ ಕಾರ್ಯ ನಿರ್ವಹಿಸದೆ ಇರುವುದರಿಂದ ಕ್ರಮ ವಹಿಸಲು ಕೋರಿದ್ದು, ಹಿರಿಯ ಆರೋಗ್ಯ ಪರಿವೀಕ್ಷಕರು ಕ್ರಮ ವಹಿಸುವುದಾಗಿ ತಿಳಿಸಿದರು.

ಶ್ರೀ ಸತೀಶ್ ಕುಮಾರ್ ಪಿ.ಸಿ ರವರು ಸಭೆಯಲ್ಲಿ ಮಾತನಾಡುತ್ತಾ, ಸಿಂಗಾಪುರ ಬಸ್ ನಿಲ್ದಾಣದ ಹತ್ತಿರವಿರುವ ಹೈಮಾಸ್ ದೀಪದ ಪ್ಯಾನಲ್ ಬೋರ್ಡ್ ದುರಸ್ಥಿಗೊಂಡಿರುವುದರಿಂದ ಸರಿಪಡಿಸಲು ಕೋರಿದರು.
ಈ ಬಗ್ಗೆ ನೋಡೆಲ್ ಅಧಿಕಾರಿಗಳು ಮಾತನಾಡುತ್ತಾ, ಸಂಬಂಧ ಪಟ್ಟ ಅಭಿಯಂತರರಿಗೆ ಕ್ರಮ ಕೈಗೊಳ್ಳಲು ತಿಳಿಸಿದರು.

ಶ್ರೀ ಮಾರಪ್ಪ ರವರು ಗಣೇಶ್ ಲೇಔಟ್‌ನಲ್ಲಿ ಕಾವೇರಿ ನೀರಿನ ಪೂರೈಕೆ ಅಸಮರ್ಪಕವಾಗಿರುವುದಾಗಿ ಹಾಗೂ ಕೆಲವು ರಸ್ತೆಗಳಲ್ಲಿ ಹೊಸದಾಗಿ ಬೀದಿ ದೀಪಗಳನ್ನು ಅಳವಡಿಸಲು ಕೋರಿದರು.
ಈ ಬಗ್ಗೆ ನೋಡೆಲ್ ಅಧಿಕಾರಿಗಳು ಮಾತನಾಡುತ್ತಾ, ಸಂಬಂಧ ಪಟ್ಟ ಅಧಿಕಾರಿಗಳಿಗೆ ಪರಿಶೀಲಿಸಿ ಕ್ರಮ ಕೈಗೊಳ್ಳಲು ತಿಳಿಸಿದರು.

ಶ್ರೀ ಹರೀಶ್ ರವರು ವರದರಾಜ ಸ್ವಾಮಿ ಬಡಾವಣೆಯಲ್ಲಿ ವಿದ್ಯುತ್ ತಂತಿಗೆ ಅಡ್ಡಲಾಗಿ ಬೆಳೆದಿರುವ ಮರದ ರೆಂಬೆ ಕೊಂಬೆಗಳನ್ನು ತೆರವುಗೊಳಿಸಲು ಕೋರಿದರು.
ಶ್ರೀ ಎಸ್ ಬಸವರಾಜು, ಕಿರಿಯ ಅಭಿಯಂತರರು ಈ ಬಗ್ಗೆ ಪರಿಶೀಲಿಸಿ ಕ್ರಮ ಕೈಗೊಳ್ಳುವುದಾಗಿ ತಿಳಿಸಿರುತ್ತಾರೆ.

ನೋಡೆಲ್ ಅಧಿಕಾರಿಗಳು ಈ ಮೇಲ್ಕಂಡ ಅಂಶಗಳ ಬಗ್ಗೆ ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳು ಹಾಗೂ ಸದಸ್ಯರೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

-ಸಹಿ-

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ 11, ಕುವೆಂಪುನಗರ

ನೋಡೆಲ್ ಅಧಿಕಾರಿ ಹಾಗೂ
ಸಹಾಯಕ ಕಾರ್ಯಪಾಲಕ ಅಭಿಯಂತರರು

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಮಾನ್ಯ ಅಪರ ಆಯುಕ್ತರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಮುಖ್ಯ ಅಭಿಯಂತರರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
5. ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ವಿಭಾಗ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯಾರಣ್ಯಪುರ ಉಪವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
8. ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ರವರ ಮಾಹಿತಿಗಾಗಿ ಸಲ್ಲಿಸಿದೆ.
9. ವಾರ್ಡ್ ಕಮಿಟಿ ಸದಸ್ಯರುಗಳ ಮಾಹಿತಿಗಾಗಿ ಸಲ್ಲಿಸಿದೆ.
10. ಕಛೇರಿ ಕಡತಕ್ಕೆ.